ಕರ್ನಾಟಕ ಸರ್ಕಾರ
(ಕಂದಾಯ ಇಲಾಖೆ)
ಉಪತಹಶೀಲ್ದಾರವರ ನ್ಯಾಯಾಲಯ ನಾಡಕಛೇರಿ ಕೊಟ್ಟೂರು

ಸಂ/ಕಂ/ಹ.ಬ./ನಾಕಕೊ/32/2016-17. ದಿನಾಂಕ:19-07-2016.

| ವಾದಿಗಳು | ಪ್ರತಿವಾದಿಗಳು |
|---|---|
| ಗೌರಮ್ಮ ಗಂಡ ಲೇಟ್ ಗಿರಿಯಪ್ಪ<br>ಜೋಳದಕೂಡ್ಲಿಗಿ ಗ್ರಾಮ<br>ಕೂಡ್ಲಿಗಿ ತಾಲೂಕು | ಕಂದಾಯ ಪರಿವೀಕ್ಷಕರು<br>ಕೊಟ್ಟೂರು |
| ಕೂಡ್ಲಿಗಿ ತಾಲೂಕು ಜೋಳದಕೂಡ್ಲಿಗಿ ಗ್ರಾಮದ ಸನಂ 583ಎ. 587ಬಿ/1. ವಿಸ್ತೀರ್ಣ 2-25. 0-47. ಸೆಂಟ್ಸು ಜಮೀನುಗಳನ್ನು ಪೋತಿವಾರಸು ಪ್ರಕಾರ ಹಕ್ಕು ಬದಲಾವಣೆ ಮಾಡುವ ಬಗ್ಗೆ. | |

ಪ್ರಸ್ತಾವನೆ:

ಕೂಡ್ಲಿಗಿ ತಾಲೂಕು ಜೋಳದಕೂಡ್ಲಿಗಿ ಗ್ರಾಮದ ಸನಂ 583ಎ. 587ಬಿ/1. ವಿಸ್ತೀರ್ಣ 2-25. 0-47. ಸೆಂಟ್ಸು ಜಮೀನುಗಳನ್ನು ಸದರಿ ಗ್ರಾಮದ ಗೌರಮ್ಮ ಗಂಡ ಲೇಟ್ ಗಿರಿಯಪ್ಪ ಇವರು ಪೋತಿವಾರಸು ಪ್ರಕಾರ ಹಕ್ಕು ಬದಲಾವಣೆ ಮಾಡಲು ಕೋರಿ ಅರ್ಜಿ ಸಲ್ಲಿಸಿರುತ್ತಾರೆ. ಈ ಬಗ್ಗೆ ಗ್ರಾಮಲೆಕ್ಕಿಗರು ಜೋಳದಕೂಡ್ಲಿಗಿ ಇವರು ನಮೂನೆ-21 ನೋಟಿಸನ್ನು ದಿನಾಂಕ 20-03-2013 ರಂದು ಗ್ರಾಮದಲ್ಲಿ ಪ್ರಚೂರು ಪಡಿಸಿ ಹಾಗೂ ಸಂಬಂಧಪಟ್ಟವರಿಗೆ ಜಾರಿ ಮಾಡಲಾಗಿ ಅರ್ಜಿದಾರರು ಮರಣ ಪ್ರಮಾಣ ಪತ್ರವನ್ನು ಸಲ್ಲಿಸಿಲ್ಲದ ಕಾರಣ ಈ ಪ್ರಕರಣವನ್ನು ಎಂ.ಆರ್.ನಂಬರ್: 55/2012-13. ದಿನಾಂಕ 21-04-2013 ರಲ್ಲಿ ಗೈರು ಮಂಜೂರು ಮಾಡಿ ಮುಂದಿನ ಕ್ರಮಕ್ಕೆ ಈ ಕಾರ್ಯಾಲಯಕ್ಕೆ ಕಳುಹಿಸಿ ಕೊಟ್ಟಿರುತ್ತಾರೆ.

ಈ ಪ್ರಕರಣವನ್ನು ಈ ಕಾರ್ಯಾಲಯದಲ್ಲಿ ವಿಚಾರಣೆ ಮಾಡುವ ದಿಸೆಯಲ್ಲಿ ಉಭಯ ಪಕ್ಷದವರಿಗೂ ನೋಟಿಸ್ಸು ನೀಡಿ ದಿನಾಂಕ 19-07-2016 ರಂದು ವಿಚಾರಣೆ ಮಾಡಲಾಯಿತು.

ವಿಚಾರಣೆ ಸಮಯದಲ್ಲಿ ಅರ್ಜಿದಾರರು ಹಾಜರಾಗಿರುತ್ತಾರೆ. ಅರ್ಜಿದಾರರು ಜೋಳದಕೂಡ್ಲಿಗಿ ಗ್ರಾಮದ ಸನಂ 583ಎ. 587ಬಿ/1. ವಿಸ್ತೀರ್ಣ 2-25. 0-47. ಸೆಂಟ್ಸು ಜಮೀನುಗಳು ವಾರಸುದಾರರಾದ ಪರುಸಪ್ಪಗಳ ಕೆಂಚವ್ವ ಗಂಡ ರಾಮಪ್ಪ ಇವರ ಹೆಸರಲ್ಲಿ ಲೆಕ್ಕ ದಾಖಲೆ ಪಟ್ಟಾ ಇರುತ್ತದೆ. ಇವರು ನಿಧನ ಹೊಂದಿರುವ ಕಾರಣ ಪೋತಿವಾರಸು ಹಕ್ಕಿನ ಪ್ರಕಾರ ಹಕ್ಕು ಬದಲಾವಣೆ ಮಾಡಬೇಕೆಂದು ಕೋರಿ ಅರ್ಜಿ ಸಲ್ಲಿಸಿದ್ದು ಈಗ ಸದರಿ ಹಕ್ಕು ಬದಲಾವಣೆ ಅರ್ಜಿಯನ್ನು ವಾಪಸ್ಸು ಪಡೆದಿರುವ ಕಾರಣ ಯಥಾಸ್ಥಿತಿಯಂತೆ ಮುಂದುವರೆಸಲು ಕೊರಿರುತ್ತಾರೆ.

ಮೇಲಿನ ಎಲ್ಲಾ ಅಂಶಗಳನ್ನು ಗಣನೆಗೆ ತೆಗೆದು ಕೊಂಡು ಸದರಿ ವಿವಾದಿತ ಜಮೀನುಗಳ ಕಂದಾಯ ಲೆಕ್ಕಗಳನ್ನು ಪರಿಶೀಲಿಸಿ ಅರ್ಜಿದಾರರು ಹೇಳಿಕೆಗಳನ್ನು ಕೇಳಿ ಅರ್ಜಿದಾರರು ಯಥಾಸ್ಥಿತಿಯಂತೆ ಮುಂದುವರೆಸಲು ಕೋರಿದ ಕಾರಣ ಈ ಕೆಳಗಿನಂತೆ ಆದೇಶ ಮಾಡಲಾಗಿದೆ.

## -:ಆದೇಶ:-

ಮೇಲೆ ವಿವರಿಸಿದ ಸಂದರ್ಭ ವಾಸ್ತುವಾಂಶ ಮತ್ತು ಕಾರಣಗಳಿಂದ ಕೂಡ್ಲಿಗಿ **ತಾಲೂಕು** ಜೋಳದಕೂಡ್ಲಿಗಿ ಗ್ರಾಮದ ಸನಂ 583ಎ. 587ಬಿ/1. ವಿಸ್ತೀರ್ಣ 2-25. 0-47. ಸೆಂಟ್ಸು ಜಮೀನುಗಳ ಅರ್ಜಿದಾರರು ಯಥಾಸ್ಥಿತಿಯಂತೆ ಮುಂದುವರೆಸಲು ಕೋರಿದ ಕಾರಣ ಈ ಪ್ರಕರಣವನ್ನು **ಈ** ಕಾರ್ಯಾಲಯದಲ್ಲಿ ಈ ಹಂತದಲ್ಲಿ ಮುಕ್ತಾಯಗೊಳಿಸಲು ಆದೇಶಿಸಲಾಗಿದೆ.

ಈ ಆದೇಶವನ್ನು ಹೇಳಿ ಬರೆಯಿಸಿ ಬೆರಳಚ್ಚು ಮಾಡಿಸಿ ತಪ್ಪುಗಳನ್ನು ತಿದ್ದಿ ದಿನಾಂಕ 19-07-2016 ರಂದು ತೆರೆದ ನ್ಯಾಯಾಲಯದಲ್ಲಿ **ಘೋಷಿಸಲಾಯಿತು.**

ಉಪತಹಶೀಲ್ದಾರರು
ನಾಡಕಛೇರಿ ಕೊಟ್ಟೂರು
ಕೊಟ್ಟೂರು

ಇದರ ಪ್ರತಿಯನ್ನು:

1) **ಅರ್ಜಿದಾರರಾದ** ಗೌರಮ್ಮ ಗಂಡ ಲೇಟ್ ಗಿರಿಯಪ್ಪ. ಜೋಳದಕೂಡ್ಲಗಿ ಗ್ರಾಮ ಕೂಡ್ಲಿಗಿ **ತಾಲೂಕು** **ಇವರಿಗೆ ಕಳುಹಿಸಿ** ಕೊಡಲಾಗಿದೆ.
2) **ಕಂದಾಯ** ಪರಿವೀಕ್ಷಕರು ಕೊಟ್ಟೂರು ಇವರ ಮಾಹಿತಿಗಾಗಿ ಕಳುಹಿಸಿ ಕೊಡಲಾಗಿದೆ.
3) ಗಣಕೀಕರಣ ವಿಭಾಗ ತಾಲೂಕು ಕಛೇರಿ ಕೂಡ್ಲಿಗಿ ಇವರ ಮುಂದಿನ ಕ್ರಮಕ್ಕಾಗಿ **ಕಳುಹಿಸಿ** ಕೊಡಲಾಗಿದೆ.
4) ಅಪೀಲು ಅವಧಿ 60 ದಿವಸ ಇರುತ್ತದೆ.